ಶ್ರೀ ಜಿ. ಪುಟ್ಟಸ್ವಾಮಿಗೌಡ : ನಿಯಮ 233 ರ ಪ್ರಕಾರ ಸದನದಲ್ಲಿ ಚರ್ಚೆ ಮಾಡುವುದಕ್ಕೆ ಅವಕಾಶವಿದೆ.

ಉಪಾಧ್ಯಕ್ಷೀಣಿಯವರು : ಚರ್ಚೆ ಮಾಡುವುದಕ್ಕೆ ಅವಕಾಶವಿದೆ ಆದರೆ ಸಾಧಾರಣವಾಗಿ ಇದರ ಬಗ್ಗೆ ಚರ್ಚೆ ಮಾಡುವುದಿಲ್ಲ, ನಾಳೆ ದಿವಸ ಸದನದ ಕಾರ್ಯಕಲಾಪಗಳ ಸಲಹಾ ಸಮಿತಿಯಲ್ಲಿ ಈ ವಿಷಯ ಇಟ್ಟು ತೀರ್ಮಾನ ಮಾಡುತ್ತೇನೆ.

ಶ್ರೀ ಜಿ. ಪುಟ್ಟಸ್ವಾಮಿಗೌಡ : ಇವತ್ತು ಏನು ವರದಿ ಕೊಟ್ಟಿದ್ದಾರೋ, ಆ ವರದಿ ಸಾರ್ವಜನಿಕವಾಗಿ ಬಹಳ ಪ್ರಾಮುಖ್ಯತೆ ಪಡೆದಂಥ ವರದಿಯಾಗಿದ್ದು ಆದರಲ್ಲಿನ ಬಹುತೇಕ ಅಂಶಗಳು ಸತ್ಯಕ್ಕೆ ದೂರವಾದುವು ಮತ್ತು ದುರುದ್ದೇಶದಿಂದ ಕೂಡಿದ್ದು, ಅಲ್ಲದೆ, ವರದಿ ಕೊಡುವಾಗ ಒಂದೇ ಕಡೆಯ ಮಾಹಿತಿ ತೆಗೆದುಕೊಂಡು ಕೊಟ್ಟಿದ್ದಾರೆ. ವರದಿಯು ದೊಷಪೂರಿತವಾಗಿದ್ದು, ವರದಿಯನ್ನು ಸದನದಲ್ಲಿ ಮಂಡಿಸುವುದಕ್ಕಿಂತ ಮೊದಲೇ ಪತ್ರಿಕೆಗಳಲ್ಲಿ ಪ್ರಚಾರವಾಗಿರುವುದಲ್ಲದೆ, ಹಕ್ಕುಚ್ಯುತಿಯೂ ಆಗಿದೆ. ಈ ಎಲ್ಲ ಆಡಳಿತಾತ್ಮಕ ಮಂಜೂರಾತಿಯಾಗಿದ್ದು, ಅನುದಾನರಹಿತ ಶಾಲೆಗಳಾಗಿವೆ. ಕೇಂದ್ರ ಸರ್ಕಾರದ ಅಧಿಸೂಚನೆಯನ್ನನುಸರಿಸಿ ಸಚಿವ ಸಂಪುಟದ ಅನುಮತಿಯನ್ನೂ ಸಹ ಪಡೆದುಕೊಂಡು ನಿಯಮಗಳ ಉಲ್ಲಂನೆಯಾಗದ ರೀತಿ ನಾವು ಕೊಟ್ಟಿದ್ದೇವೆ. ಆದರೆ ಈ ಎಲ್ಲಾ ವಿಷಯಗಳನ್ನು ಗಾಳಿಗೆ ತೂರಿಮಾಡಿದ್ದಾರೆನ್ನತಕ್ಕಂಥ ಆಪಾದನೆಯನ್ನು ಮೇಲಿಂದ ಮೇಲೆ ನನ್ನ ಮೇಲೆ ಮಾಡುತ್ತಿದ್ದಾರೆ. ನರ್ಸಿಂಗ್ ಕಾಲೇಜು ಹಾಗೂ ಫಾರ್ಮಸಿ ಕಾಲೇಜುಗಳನ್ನು ಕೊಟ್ಟಿದ್ದಾರೆಂದು ಸತತವಾಗಿ ನಮ್ಮ ಅಂದಾಜು ಸಮಿತಿಯವರು ತಮ್ಮ ಕಾರ್ಯವ್ಯಾಪ್ತಿ ಮೀರಿ ನನಗೆ ಹಕ್ಕುಚ್ಯುತಿ ತಂದಿದ್ದಾರೆ. ಇದರ ಬಗ್ಗೆ ಚರ್ಚೆ ಮಾಡುವುದಕ್ಕೆ ನಿಯಮ 233ರ ಕೆಳಗೆ ತಾವು ನನಗೆ ಅವಕಾಶ ಮಾಡಿಕೊಡಬೇಕು.

ಉಪಾಧ್ಯಕ್ಷೀಣಿಯವರು : ಇದರ ಬಗ್ಗೆ ಕಾರ್ಯಕಲಾಪಗಳ ಸಲಹಾ ಸಮಿತಿಯಲ್ಲಿ ತೀರ್ಮಾನ ಮಾಡುತ್ತೇನೆ.

ಶ್ರೀ ಜಿ. ಪುಟ್ಟಸ್ವಾಮಿಗೌಡ : ನನಗೆ ತಮ್ಮ ರಕ್ಷಣೆ ಬೇಕಾಗುತ್ತದೆ. ದುರುದ್ದೇಶದಿಂದ ಅಂದಾಜು ಸಮಿತಿಯವರು ನನ್ನ ಮೇಲೆ ನಾಲ್ಕು ವರದಿಗಳಲ್ಲಿ ಆಪಾದನೆ ಮಾಡಿದ್ದಾರೆ. ಅಂದಾಜು ಸಮಿತಿ ಇರುವುದು ಪುಟ್ಟಸ್ವಾಮಿ ಗೌಡರಿಗೋಸ್ಕರ ಎನ್ನುವ ಸಂಶಯ ಇವ್ವೊತ್ತು ರಾಜ್ಯದ ಜನತೆಗೆ ಬಂದಿದೆ. ಆದುದರಿಂದ ಈ ಒಂದು ದಿಸೆಯಲ್ಲಿ ಇದು ಚರ್ಚೆಗೆ ಅರ್ಹವಾದಂಥ ವಿಚಾರ. ದಯವಿಟ್ಟು ಚರ್ಚೆಗೆ ಅವಕಾಶ ಮಾಡಿಕೊಡಬೇಕು.

ಶಾಸನಾ ರಚನಾ ಕಾರ್ಯ ಕಲಾಪಗಳು.

1992ರ ಕರ್ನಾಟಕ ಸರಕುಗಳ ಪ್ರವೇಶದ ಮೇಲಣ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ

(ಮಂಡನೆಗೆ ಅನುಮತಿ ಕೋರಿಕೆ)

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿ) ಮಾನ್ಯ ಉಪಾಧ್ಯಕ್ಷೀಣಿಯವರೆ, 1992 ರ ಕರ್ನಾಟಕ ಸರಕುಗಳ ಪ್ರವೇಶದ ಮೇಲಣ ತೆರಿಗೆ (ಎರಡನೆ ತಿದ್ದು

ಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷಣೆಯವರು : ಪ್ರಸ್ತಾವ ಏನೆಂದರೆ " 1992ರ ಕರ್ನಾಟಕ ಸರಕುಗಳ ಪ್ರವೇಶದ ಮೇಲಣ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು)"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿ) : ಮಾನ್ಯ ಉಪಾಧ್ಯಕ್ಷಣೆಯವರೇ, 1992ರ ಕರ್ನಾಟಕ ಸರಕುಗಳ ಪ್ರವೇಶದ ಮೇಲಣ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಣೆಯವ : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ I

1993ರ ಕರ್ನಾಟಕ ಬಾಡಿಗೆ ನಿಯಂತ್ರಣ (ಪೂರ್ಣನ್ವಯದಿಂದ ಅವಧಿ ವಿಸ್ತರಣೆ) ವಿಧೇಯಕ.

(ಮಂಡನೆಗೆ ಅನುಮತಿ ಕೋರಿಕೆ)

ಶ್ರೀ ಎಂ. ರಾಜಶೇಖರ ಮೂರ್ತಿ (ಕಂದಾಯ ಮಂತ್ರಿ) : ಮಾನ್ಯ ಉಪಾಧ್ಯಕ್ಷಿಣೆಯವರೆ, 1993ರ ಕರ್ನಾಟಕ ಬಾಡಿಗೆ ನಿಯಂತ್ರಣ (ಪೂರ್ವಾನ್ವಯದಿಂದ ಅವಧಿ ವಿಸ್ತರಣೆ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷಣೆಯವರು : ಪ್ರಸ್ತಾವ ಏನೆಂದರೆ, " 1993ರ ಕರ್ನಾಟಕ ಬಾಡಿಗೆ ನಿಯಂತ್ರಣ (ಪೂರ್ವಾನ್ವಯದಿಂದ ಅವಧಿ ವಿಸ್ತರಣೆ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ. ರಾಜಶೇಖರ ಮೂರ್ತಿ : (ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷಿಣೆಯವರೆ, 1993ರ ಕರ್ನಾಟಕ ಬಾಡಿಗೆ ನಿಯಂತ್ರಣ (ಪೂರ್ವಾನ್ವಯದಿಂದ ಅವಧಿ ವಿಸ್ತರಣೆ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಣೆಯವರು : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ - I, II

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1992ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು) : ಸನ್ಮಾನ್ಯ ಉಪಾಧ್ಯಕ್ಷಿಣೆಯವರೆ, 1992 ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.